ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ, ಅನುದಾನ ಖರ್ಚು ಕುರಿತು

ಶ್ರೀ ಯು. ಬಿ. ವೆಂಕಟೇಶ್(ನಾಮನಿರ್ದೇಶನ ಹೊಂದಿದವರು) -

489 (583) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು;

(ಆ) ಕಳೆದ ಮೂರು (2018-19, 2019-20 ಮತ್ತು 2020-21) ವರ್ಷಗಳಿಂದ ಗ್ರಾಮ ಪಂಚಾಯತಿಗಳಿಗೆ ವಿವಿಧ ಯೋಜನೆಯಡಿಯಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು; ಬಳಕೆಯಾಗಿರುವ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಇ) ಗ್ರಾಮ ಪಂಚಾಯತಿಗಳು ಅನುದಾನದ ಕೊರತೆಯಿಂದ ಗ್ರಾಮಗಳ ಅಭಿವೃದ್ಧಿಗೆ ಹೆಚ್ಚು ಒತ್ತುಕೊಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಈ) ರಾಜ್ಯದ ಎಷ್ಟು ಗ್ರಾಮ ಪಂಚಾಯತಿಗಳಲ್ಲಿ ಸಿಬ್ಬಂದಿಯ ಕೊರತೆಯಿದೆ; ಸಿಬ್ಬಂದಿ ನೇಮಕಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರವನ್ನು ನೀಡುವುದು)